# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ

ಮುಕ್ತಗಂಗೋತ್ರಿ, ಮೈಸೂರು – ೫೭೦ ೦೦೬

'ವಿಶ್ವವಿದ್ಯಾನಿಲಯದ 25ನೇ ವರ್ಷದ ಬೆಳ್ಳಿ ಹಬ್ಬದ ವರ್ಷಾಚರಣೆ' ಜೂನ್ – 2021 ರಿಂದ ಜೂನ್ – 2022 ರವರೆಗೆ

ದಿನಾಂಕ: **24–04–2022** ರಂದು ಪೂರ್ವಾಹ್ನ **10:00** ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಕುಲಪತಿಗಳ ಕಚೇರಿ ಸಭಾಂಗಣದಲ್ಲಿ ನಡೆದ 21ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ನಡಾವಳಿ.

| ಉಪಸ್ಥಿತರು | |
|---|---|
| **ಡಾ. ವಿದ್ಯಾಶಂಕರ್. ಎಸ್.**<br>ಮಾನ್ಯ ಕುಲಪತಿಗಳು ಹಾಗು ಅಧ್ಯಕ್ಷರು<br>ಶೈಕ್ಷಣಿಕ ಮಂಡಳಿ,<br>ಕರಾಮುವಿ, ಮೈಸೂರು. | **ಪ್ರೊ. ರಾಜಣ್ಣ .ಆರ್.**<br>ಕುಲಸಚಿವರು ಮತ್ತು ಸದಸ್ಯ ಕಾರ್ಯದರ್ಶಿಗಳು<br>ಶೈಕ್ಷಣಿಕ ಮಂಡಳಿ,<br>ಕರಾಮುವಿ, ಮೈಸೂರು. |
| **ಪ್ರೊ. ಕಾಂಬ್ಳೆ ಅಶೋಕ್**<br>ಡೀನ್ (ಶೈಕ್ಷಣಿಕ)<br>ಸದಸ್ಯರು ಶೈಕ್ಷಣಿಕ ಮಂಡಳಿ,<br>ಕರಾಮುವಿ, ಮೈಸೂರು. | **ಡಾ. ಎ. ಖಾದರ್ ಪಾಷಾ**<br>ಹಣಕಾಸು ಅಧಿಕಾರಿಗಳು ಹಾಗು ಸದಸ್ಯರು<br>ಶೈಕ್ಷಣಿಕ ಮಂಡಳಿ,<br>ಕರಾಮುವಿ, ಮೈಸೂರು. |
| **ಡಾ. ಕೆ.ಬಿ. ಪ್ರವೀಣ**<br>ಕುಲಸಚಿವರು (ಪರೀಕ್ಷಾಂಗ)<br>ಸದಸ್ಯರು ಶೈಕ್ಷಣಿಕ ಮಂಡಳಿ,<br>ಕರಾಮುವಿ, ಮೈಸೂರು. | **ಡಾ. ಷಣ್ಮುಖ**<br>ಡೀನ್ (ಅಧ್ಯಯನ ಕೇಂದ್ರಗಳು),<br>ಸದಸ್ಯರು ಶೈಕ್ಷಣಿಕ ಮಂಡಳಿ,<br>ಕರಾಮುವಿ, ಮೈಸೂರು. |
| **ಡಾ. ಲಕ್ಷ್ಮಿ .ಎನ್.**<br>ಮುಖ್ಯಸ್ಥರು, ಶಿಕ್ಷಣಶಾಸ್ತ್ರ ಅಧ್ಯಯನ ಹಾಗು ಸಂಶೋಧನಾ ವಿಭಾಗ<br>ಸದಸ್ಯರು ಶೈಕ್ಷಣಿಕ ಮಂಡಳಿ,<br>ಕರಾಮುವಿ, ಮೈಸೂರು. | |
| **ವಿಶೇಷ ಆಹ್ವಾನಿತರು** | |
| **ಡಾ. ನಿರಂಜನ್ ರಾಜ್**<br>CIQA ನಿರ್ದೇಶಕರು<br>ಕರಾಮುವಿ, ಮೈಸೂರು. | **ಡಾ. ಹೆಚ್. ರಾಜೇಶ್ವರಿ**<br>ವಿಶೇಷಾಧಿಕಾರಿ – ಡೀನ್ (ಶೈಕ್ಷಣಿಕ)<br>ಕರಾಮುವಿ, ಮೈಸೂರು. |

ಸಭೆಗೆ ಹಾಜರಾಗಿದ್ದ ಸದಸ್ಯರುಗಳನ್ನು ಮಾನ್ಯ ಕುಲಸಚಿವರು ಸ್ವಾಗತಿಸುವುದರೊಂದಿಗೆ ಸಭೆಯು ಪ್ರಾರಂಭವಾಯಿತು. ಮುಂದುವರೆದು ಮಾನ್ಯ ಕುಲಸಚಿವರು ಮಾತನಾಡುತ್ತಾ, 21ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ಕಾರ್ಯಸೂಚಿಯನ್ನು ಸಭೆಯಲ್ಲಿ ಮಂಡಿಸಲು ವಿಶೇಷಾಧಿಕಾರಿಗಳು ಡೀನ್ (ಶೈಕ್ಷಣಿಕ) ಅವರಿಗೆ ಸೂಚಿಸಿದರು.

ಕುಲಸಚಿವರು ಕುಲಪತಿಗಳು

## ವಿಷಯ ಸಂಖ್ಯೆ: 21.01

**ವಿಷಯ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2018-19 ಮತ್ತು 2019-20ನೇ ಶೈಕ್ಷಣಿಕ ಸಾಲುಗಳಲ್ಲಿ ವಿವಿಧ ಶಿಕ್ಷಣ ಕಾರ್ಯಕ್ರಮಗಳಿಗೆ ಪ್ರವೇಶಾತಿ ಪಡೆದು ಅಕ್ಟೋಬರ್/ನವೆಂಬರ್-2021ರ ವರೆಗೆ ನಡೆದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ: 25-04-2022 ರಂದು ನಡೆಸಲು ವಿದ್ಯಾರ್ಥಿಗಳ ಪಟ್ಟಿಯನ್ನು ಅನುಮೋದಿಸುವ ಬಗೆಗೆ.**

*****

ಅಧಿಸೂಚನೆ ಸಂಖ್ಯೆ: ಕರಾಮುವಿ/ಪವಿ/ಘವಿ/501/2021-22, ದಿನಾಂಕ:14-02-2022 ಹಾಗೂ ಸಂಖ್ಯೆ:ಕರಾಮುವಿ:ಆವಿ:ಜೆಎಲ್-2/17ನೇ ಘ.ಕೋ/2021-22 ದಿನಾಂಕ:29-03-2022ರ ಪ್ರಕಾರ 17ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ:25-04-2022 ರಂದು ನಡೆಸಲಾಗುತ್ತಿದೆ.

ಈ ಘಟಿಕೋತ್ಸವದಲ್ಲಿ 2018-19ನೇ ಸಾಲಿನಲ್ಲಿ ಪ್ರವೇಶಾತಿ ಪಡೆದ ಸ್ನಾತಕ/ಸ್ನಾತಕೋತ್ತರ ಕಾರ್ಯಕ್ರಮಗಳಲ್ಲಿ ಉತ್ತೀರ್ಣರಾದ 5,155 ವಿದ್ಯಾರ್ಥಿಗಳು ಹಾಗೂ 2019-20ನೇ ಸಾಲಿನಲ್ಲಿ ಪ್ರವೇಶಾತಿ ಪಡೆದು ಎಂ.ಎ/ಎಂ.ಕಾಂ, ಎಂ.ಲಿಬ್.ಐ.ಎಸ್ಸಿ ಮತ್ತು ಬಿ.ಲಿಬ್.ಐ.ಎಸ್ಸಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವ 3,183 ವಿದ್ಯಾರ್ಥಿಗಳು ಹಾಗೂ 2012-2013 ಹಾಗೂ ಅದಕ್ಕೂ ಹಿಂದಿನ ಸಾಲಿನಲ್ಲಿ ಪ್ರವೇಶಾತಿ ಪಡೆದು ಏಪ್ರಿಲ್/ಮೇ 2017ರ ನಂತರದಲ್ಲಿ ನಡೆದ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಸೇರಿ **ಒಟ್ಟು 8,338** ವಿದ್ಯಾರ್ಥಿಗಳು ಅರ್ಹರಾಗಿರುತ್ತಾರೆ. ಪ್ರಮಾಣ ಪತ್ರಗಳನ್ನು ವಿತರಿಸಲು ಹಾಗೂ 48 ಚಿನ್ನದ ಪದಕ ವಿಜೇತರು, 38 ನಗದು ಬಹುಮಾನ ವಿಜೇತರು ಹಾಗೂ 31 ಪಿಹೆಚ್.ಡಿ ಪದವಿ ಪಡೆಯಲು ಅರ್ಹರಾಗಿರುವ ವಿದ್ಯಾರ್ಥಿಗಳನ್ನು ವೇದಿಕೆಗೆ ಆಹ್ವಾನಿಸಿ ಪದವಿ/ಪದಕ/ನಗದು ಬಹುಮಾನಗಳನ್ನು ವಿತರಿಸಬೇಕಾಗಿರುವ ಪ್ರಸ್ತಾವನೆಯನ್ನು ದಿನಾಂಕ:24-04-2022ರಂದು ನಡೆಯಲಿರುವ 21ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ಚರ್ಚೆ ಮತ್ತು ನಿರ್ಣಯಕ್ಕಾಗಿ ಮಂಡಿಸಿದೆ.

**ತೀರ್ಮಾನ : ವಿಷಯ ಸಂಖ್ಯೆ:21.01 ರ ಬಗ್ಗೆ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಸಿತು. ಅದರಂತೆ ಈ ಕೆಳಕಂಡ ತೀರ್ಮಾನಗಳನ್ನು ತೆಗೆದುಕೊಳ್ಳಲಾಯಿತು.**

- **2018-19 ಹಾಗೂ 2019-20ನೇ ಶೈಕ್ಷಣಿಕ ಸಾಲಿನ ಹಾಗೂ 2012-13 ಮತ್ತು ಅದಕ್ಕೂ ಹಿಂದಿನ ಸಾಲಿನಲ್ಲಿ ಪ್ರವೇಶಾತಿ ಪಡೆದು ಏಪ್ರಿಲ್/ಮೇ 2017ರ ನಂತರದಲ್ಲಿ ನಡೆದ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಎಲ್ಲಾ ಅರ್ಹ ವಿದ್ಯಾರ್ಥಿಗಳು, 17ನೇ ಘಟಿಕೋತ್ಸವದಲ್ಲಿ ಪದವಿ ಪಡೆಯಲು ಅನುಮೋದಿಸಲಾಯಿತು.**
- **17ನೇ ಘಟಿಕೋತ್ಸವಕ್ಕೆ ಖುದ್ದಾಗಿ ಹಾಜರಿರಲು ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಘಟಿಕೋತ್ಸವಕ್ಕೆ ಹಾಜರಾಗಲು ಅವಕಾಶ ಮಾಡಿಕೊಡಬೇಕು ಎಂದು ನಿರ್ಣಯಿಸಲಾಯಿತು.**
- **17ನೇ ಘಟಿಕೋತ್ಸವ ಸಮಾರಂಭದಲ್ಲಿ ರ್‍ಯಾಂಕ್ ಚಿನ್ನದ ಪದಕ/ನಗದು ಬಹುಮಾನ ಪಡೆಯಲು ಅರ್ಹರಾದ ವಿದ್ಯಾರ್ಥಿಗಳನ್ನು ವೇದಿಕೆಗೆ ಆಹ್ವಾನಿಸಿ ಪದವಿ/ಪದಕ/ಬಹುಮಾನ ಪ್ರಧಾನ ಮಾಡಿಸುವಂತೆ ನಿರ್ಣಯಿಸಲಾಯಿತು.**

ಕುಲಸಚಿವರು

ಕುಲಪತಿಗಳು

ಅಂತಿಮವಾಗಿ 21ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಗೆ ಆಗಮಿಸಿ, ಮಂಡಿತ ವಿಷಯದ ಬಗ್ಗೆ ಚರ್ಚಿಸಿ, ತಮ್ಮ ಅಮೂಲ್ಯ ಸಲಹೆ, ಸೂಚನೆಗಳನ್ನು ನೀಡಿ, ಸಭೆಯನ್ನು ಸುಸೂತ್ರವಾಗಿ ನಡೆಸಿಕೊಟ್ಟಿದ್ದಕ್ಕೆ ಎಲ್ಲಾ ಸದಸ್ಯರುಗಳಿಗೂ ಮಾನ್ಯ ಕುಲಸಚಿವರು ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಸಭೆಯು ಮುಕ್ತಾಯಗೊಂಡಿತು.

**ಕುಲಸಚಿವರು ಹಾಗು**
**ಸದಸ್ಯ ಕಾರ್ಯದರ್ಶಿಗಳು**

**ಕುಲಪತಿಗಳು ಹಾಗು ಅಧ್ಯಕ್ಷರು**